**3 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**C.C. No.1009/2021**

**CW- 24** **PW:4**

| | |
|---|---|
| ಸಾಕ್ಷಿಯ ಹೆಸರು | ಃ ಕುಮಾರ ಎನ್ |
| ತಂದೆ /ಗಂಡನ ಹೆಸರು | ಃ ನಿಂಗಪ್ಪ |
| ವಯಸ್ಸು | ಃ 60 ವರ್ಷ |
| ಉದ್ಯೋಗ | ಃ ಡಿವಾಯ್ ಎಸ್ ಪಿ ಚನ್ನರಾಯಪಟ್ಟಣ |
| ವಾಸಸ್ಥಳ | ಃ ಹುಬ್ಬಳ್ಳಿ |

ದಿಃ **26.03.2026.** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನವೆಂಬರ್ 2013 ರಿಂದ ಡಿಸೆಂಬರ್ 2013 ರವರೆಗೆ ನವನಗರ ಪೊಲೀಸ ಠಾಣೆಯಲ್ಲಿ ಹೆಚ್ಚುವರಿ ಕರ್ತವ್ಯದ ಮೇರೆಗೆ ಪಿ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿನಾಂಕ 12.11.2013 ರಂದು ಈ ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-22 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ಆರೋಪಿಯನ್ನು ಪೊಲೀಸ್ ಕಸ್ಟಡಿಗೆ ಮಾನ್ಯ ನ್ಯಾಯಾಲಯದಿಂದ ಪಡೆದುಕೊಂಡು ಆತನನ್ನು ವಿಚಾರಿಸಿ ಹೇಳಿಕೆ ಪಡೆದುಕೊಂಡಿರುತ್ತೇನೆ. ಆದೇ ದಿನ ಚಾಸಾ-1 ರವರ ಮರುಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಆರೋಪಿಯನ್ನು ಮಾನ್ಯ ನ್ಯಾಯಾಲಯಕ್ಕೆ ರಿಮ್ಯಾಂಡ್ ಅರ್ಜಿಯೊಂದಿಗೆ ಹಾಜರುಪಡಿಸಿರುತ್ತೇನೆ. ದಿನಾಂಕ 15.11.2013 ರಂದು ವಿದ್ಯಾಗಿರಿ ಪೊ. ಠಾ. ಈ ಪ್ರಕರಣಕ್ಕೆ ಸಂಬಂದಿಸಿದ ಒಂದು ಕಂಪ್ಯೂಟರ್ ಮಾನಿಟರ್ ಯನ್ನು ಪಿ ಸಿ ನಂಃ2372 ರವರು ಹಾಜರುಪಡಿಸಿದ ಮೇರೆಗೆ ಪಂಚರ ಸಮಕ್ಷಮ ಸದರಿ ಕಂಪ್ಯೂಟರ್ ಮಾನಿಟರ್ ಯನ್ನು ಅಮಾನತು ಮಹಜರು ತಯಾರಿಸಿ ವಶಕ್ಕೆ ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಸದರಿ ಅಮಾನತು ಮಹಜರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಅದಕ್ಕೆ ನಾನು ಸಹಿಯನ್ನು ಮಾಡಿರುತ್ತೇನೆ. ನಂತರ ಸದರಿ ಕಂಪ್ಯೂಟರ್ ಮಾನಿಟರ್ ಯನ್ನು ಮಾಲು ಪಟ್ಟಿಯಲ್ಲಿ ನಮೂದಿಸಿ ಮಾನ್ಯ ನ್ಯಾಯಾಲಯಕ್ಕೆ

ನಿವೇದಿಸಿರುತ್ತೇನೆ. ಆದೇ ದಿನ ಚಾಸಾ-17 ರಿಂದ 22 ರವರ ಮರುಹೇಳಿಕೆ ಹಾಗೂ ಚಾಸಾ-1 ರವರ ಮರು ಹೇಳಿಕೆಯನ್ನು ಪಡೆದಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-25 ರವರಿಗೆ ನೀಡಿರುತ್ತೇನೆ. ನ್ಯಾಯಾಲಯದ ಮುಂದೆ ಇರುವ ಮಾನಿಟರನ್ನು ನೋಡಿ ಗುರುತಿಸುತ್ತಿದ್ದು ಅದನ್ನು ಮು ಮಾ.1 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರಾರಿಯಾಗಿದ್ದು ಪಾಟಿಸವಾಲು ಇರುವುದಿಲ್ಲ ಎಂದು ತೆಗೆದುಕೊಳ್ಳಲಾಯಿತು.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

**(ಶ್ರೀ ರಮೇಶ ಎಸ್ ಗಾಣಿಗೇರ)**

**3** ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.